**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** ಕೇಂದ್ರ ಪುರಸ್ಕೃತ ರಾಜೀವ್ ಗಾಂಧಿ ಪಂಚಾಯತಿ ಸಶಕ್ತೀಕರಣ ಅಭಿಯಾನ್ (ಆರ್.ಜಿ.ಪಿ.ಎಸ್.ಎ) ಯೋಜನೆಯಡಿಯ ಆಡಳಿತಾತ್ಮಕ ವೆಚ್ಚವನ್ನು ಬಿಡುಗಡೆ ಮಾಡುವ ಕುರಿತು.

**ಓದಲಾಗಿದೆ:**

ಭಾರತ ಸರ್ಕಾರದ ಪಂಚಾಯತ್ ರಾಜ್ ಮಂತ್ರಾಲಯ, ನವದೆಹಲಿ ರವರ ಪತ್ರ ಸಂಖ್ಯೆ:ಎನ್-39011/23/2013-Pol.II ದಿನಾಂಕ: 23-09-2013.

**ಪ್ರಸ್ತಾವನೆ:**

ಭಾರತ ಸರ್ಕಾರದ ಕೇಂದ್ರ ಪುರಸ್ಕೃತ ರಾಜೀವ್ ಗಾಂಧಿ ಪಂಚಾಯತಿ ಸಶಕ್ತೀಕರಣ ಅಭಿಯಾನ್ (ಆರ್.ಜಿ.ಪಿ.ಎಸ್.ಎ) ಯೋಜನೆಯಡಿ ಉತ್ತಮ ಸಾಧನೆಗೈದಿರುವ ಪಂಚಾಯತ್ ರಾಜ್ ಸಂಸ್ಥೆಗಳನ್ನು ಗೌರವಿಸಿ ಉತ್ತೇಜಿಸುವ ಉದ್ದೇಶದಿಂದ ಕೇಂದ್ರ ಸರ್ಕಾರ ರೂ.168.00ಲಕ್ಷಗಳನ್ನು ಬಿಡುಗಡೆ ಮಾಡಲು ಉದ್ದೇಶಿಸಿದೆ. ಇದಕ್ಕಾಗಿ ರಾಜ್ಯದ ಎಲ್ಲಾ ಜಿಲ್ಲಾ/ತಾಲ್ಲೂಕು ಹಾಗೂ ಗ್ರಾಮ ಪಂಚಾಯತಿಗಳಿಂದ ನಿಗದಿತ ನಮೂನೆಯಲ್ಲಿ ಅಭಿವೃದ್ಧಿ ಸೂಚ್ಯಾಂಕಗಳನ್ನು ಪಡೆಯಲಾಗಿತ್ತು. ಈ ಸೂಚ್ಯಾಂಕಗಳನ್ನು ಆಧರಿಸಿ 9 ಜಿಲ್ಲಾ ಪಂಚಾಯತಿಗಳು 13 ತಾಲ್ಲೂಕು ಪಂಚಾಯತಿಗಳು ಹಾಗೂ 22 ಗ್ರಾಮ ಪಂಚಾಯತಿಗಳು ಸೂಚ್ಯಾಂಕಗಳನ್ನು ನೀಡಿದ್ದು, ಅವುಗಳಲ್ಲಿ 1 ಜಿಲ್ಲಾ ಪಂಚಾಯತಿ, 2 ತಾಲ್ಲೂಕು ಪಂಚಾಯತಿಗಳು ಹಾಗೂ 4 ಗ್ರಾಮ ಪಂಚಾಯತಿಗಳನ್ನು ಪರಿಶೀಲನೆಗಾಗಿ ಆಯ್ಕೆ ಮಾಡಿಕೊಳ್ಳಲಾಗಿತ್ತು. ಈ ರೀತಿ ಆಯ್ಕೆಗೊಂಡ ತಾಲ್ಲೂಕು, ಜಿಲ್ಲಾ ಮತ್ತು ಗ್ರಾಮ ಪಂಚಾಯತಿಗಳಿಗೆ ಭೇಟಿ ನೀಡಿ, ಅವುಗಳು ನೀಡಿದ್ದ ಅಭಿವೃದ್ಧಿ ಸೂಚ್ಯಾಂಕಗಳ ಬಗ್ಗೆ ಸ್ಥಳ ಪರಿಶೀಲನೆ ಮಾಡಲು ಮತ್ತು ವರದಿಯನ್ನು ಸಿದ್ಧಪಡಿಸಲು ತೃತೀಯ ಸಂಸ್ಥೆಯಿಂದ (Third Party evalivation) ಮೌಲ್ಯ ಮಾಪನ ಮಾಡಿಸಲು ಸರ್ಕಾರವು ನಿರ್ಧರಿಸಿದ್ದು, ಈ ಮೌಲ್ಯಮಾಪನದ ಜವಾಬ್ದಾರಿಯನ್ನು ಮೈಸೂರಿನ ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಸಂಸ್ಥೆಗೆ ವಹಿಸಲಾಗಿತ್ತು. ಮೇಲೆ ಓದಲಾದ (1)ರ ಕೇಂದ್ರ ಸರ್ಕಾರದ ಪತ್ರದಲ್ಲಿ ಈ ಉದ್ದೇಶಕ್ಕಾಗಿ ರೂ. 1,24,915/- ಗಳನ್ನು ಒದಗಿಸಿದೆ. ಮೌಲ್ಯ ಮಾಪನ ನಿರ್ವಹಿಸಿದ ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಸಂಸ್ಥೆಗೆ, ಕೇಂದ್ರ ಸರ್ಕಾರವು ಆಡಳಿತಾತ್ಮಕ ವೆಚ್ಚಕ್ಕಾಗಿ ನಿಗಧಿಗೊಳಿಸಿದ್ದ ರೂ. 1,24,915/- ಗಳನ್ನು ಬಿಡುಗಡೆಮಾಡಲು ಸರ್ಕಾರ ನಿರ್ಧರಿಸಿದೆ. ಅದರಂತೆ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 47 ತಾಪಸ 2013, ಬೆಂಗಳೂರು, ದಿನಾಂಕ: 20-09-2014.**

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವ ಎಲ್ಲಾ ಅಂಶಗಳನ್ನು ಗಣನೆಗೆ ತೆಗೆದುಕೊಂಡು, "ರಾಜೀವ್‌ಗಾಂಧಿ ಪಂಚಾಯತಿ ಸಶಕ್ತೀಕರಣ ಅಭಿಯಾನ್(ಆರ್.ಜಿ.ಪಿ.ಎಸ್.ಎ)ಯೋಜನೆಯಡಿ"ಯಲ್ಲಿ ಉತ್ತಮ ಸಾಧನೆಗೈದಿರುವ ಒಂದು ಜಿಲ್ಲಾ ಪಂಚಾಯತಿ, ಎರಡು ತಾಲ್ಲೂಕು ಪಂಚಾಯತಿಗಳು ಹಾಗೂ ನಾಲ್ಕು ಗ್ರಾಮ ಪಂಚಾಯತಿಗಳಿಗೆ ಭೇಟಿ ನೀಡಿ, ಸ್ಥಳ ಪರಿಶೀಲನೆ ಮಾಡಿ ಹಾಗೂ ಸೂಚ್ಯಾಂಕಗಳ ಬಗ್ಗೆ ಅಧ್ಯಯನ ಹಾಗೂ ಮೌಲ್ಯ ಮಾಪನ ಮಾಡಿ ವರದಿಯನ್ನು ಸಲ್ಲಿಸಿರುವ ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಸಂಸ್ಥೆ, ಮೈಸೂರು ರವರಿಗೆ ರೂ. 1,24,915/- (ಒಂದು ಲಕ್ಷದ ಇಪ್ಪತ್ತನಾಲ್ಕು ಸಾವಿರದ ಒಂಬೈನೂರು ಹದಿನೈದು ರೂಪಾಯಿಗಳು ಮಾತ್ರ)ಗಳನ್ನು ಬಿಡುಗಡೆ ಗೊಳಿಸಿ ಆದೇಶಿಸಲಾಗಿದೆ. ಈ ಮೊತ್ತವನ್ನು ಬೆಂಗಳೂರಿನ ಇಂದಿರಾ ನಗರದಲ್ಲಿರುವ ದೇನಾ ಬ್ಯಾಂಕ್‌ನಲ್ಲಿ ತೆರೆಯಲಾಗಿರುವ ಎಸ್.ಬಿ. ಖಾತೆಯ ಸಂಖ್ಯೆ 052110026480 ರಿಂದ ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಸಂಸ್ಥೆ, ಮೈಸೂರಿನ ಸ್ಟೇಟ್ ಬ್ಯಾಂಕ್ ಆಫ್ ಮೈಸೂರಿನ ಪ್ರಧಾನ ಶಾಖೆಯಲ್ಲಿನ ಆವರ್ತಕ ವೆಚ್ಚದ ಖಾತೆ ಸಂಖ್ಯೆ 54037550393 (IFSC Code SBMY0040054)ಗೆ ವರ್ಗಾಯಿಸುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

ಎಸ್.ಎನ್. ಕಲಾವತಿ

**(ಎಸ್.ಎನ್.ಕಲಾವತಿ)**
ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ,**

1.ಮಹಾಲೇಖಪಾಲರು (ಎ ಅಂಡ್ ಇ), ಕರ್ನಾಟಕ, ಬೆಂಗಳೂರು.
2.ಪ್ರಧಾನ ಮಹಾಲೇಖಪಾಲರು (ಜಿ ಅಂಡ್ ಎಸ್ ಎಸ್ ಎ), ಕರ್ನಾಟಕ, ಬೆಂಗಳೂರು.
3.ಪ್ರಧಾನ ಮಹಾಲೇಖಪಾಲರು (ಇ ಅಂಡ್ ಆರ್ ಎಸ್ ಎ), ಕರ್ನಾಟಕ, ಬೆಂಗಳೂರು.
4.ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಸಂಸ್ಥೆ ಮೈಸೂರು, ಲಲಿತಮಹಲ್ ರಸ್ತೆ, ಮೈಸೂರು.
6.ಇಲಾಖಾ ವೆಬ್‌ಸೈಟ್ / ಕರ್ನಾಟಕ ವಿಕಾಸ ಮಾಸ ಪತ್ರಿಕೆ.
7.ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.

**ಪ್ರತಿಯನ್ನು ಮಾಹಿತಿಗಾಗಿ :**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು (ಪಂ.ರಾಜ್), ಗ್ರಾ.ಅ.ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2.ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
3.ನಿರ್ದೇಶಕರು (ಪಂ.ರಾಜ್-2), ಗ್ರಾ.ಅ.ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕ, ಬಹುಮಹಡಿಗಳ ಕಟ್ಟಡ, ಬೆಂಗಳೂರು.